# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಹೊಂಬೇಗೌಡನಗರ ಉಪವಿಭಾಗ,**
**ಬೃ.ಬೆಂ.ಮ.ಪಾಲಿಕೆ 7ನೇ ಅಡ್ಡರಸ್ತೆ, 7ನೇ ಮುಖ್ಯರಸ್ತೆ, ಜಯನಗರ 2ನೇ ಬ್ಲಾಕ್ ಬೆಂಗಳೂರು**

ಸಂಖ್ಯೆಸ.ಇಂ/ವಾ–153/ವಾರ್ಡ್ ಸಭೆ/2020–21 ದಿನಾಂಕ:18/01/2021

## ವಾರ್ಡ್ –153ರ ವಾರ್ಡ್ ಸಭೆಯ ನಡವಳಿ

ದಿನಾಂಕ:18/01/2021 ರಂದು ಹೊಂಬೇಗೌಡನಗರ ಉಪವಿಭಾಗ ವಾರ್ಡ್–153ರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ವರಲಕ್ಷ್ಮಿ ಸಹಾಯಕ ಆಯುಕ್ತರು, (ಆಡಳಿತ) ದಕ್ಷಿಣ ವಲಯ ವಾರ್ಡ್ 153ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

| ಕ್ರಮ ಸಂಖ್ಯೆ | ಅಧಿಕಾರಿಯವರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1 | ಶ್ರೀ. ವರಲಕ್ಷಮ್ಮ ಎಲ್. | ಸಹಾಯಕ ಆಯುಕ್ತರು (ಆಡಳಿತ) ದಕ್ಷಿಣ ವಲಯ | ಹಾಜರಿದ್ದರು |
| 2 | ಶ್ರೀ. ನರಸಿಂಹಯ್ಯ ಎನ್. | ಹಿರಿಯ ಅಭಿಯಂತರರು ವಾರ್ಡ್–153–ಜಯನಗರ | ಹಾಜರಿದ್ದರು |
| 3 | ಶ್ರೀ. ವಿದ್ಯಾಧರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–153 | ಹಾಜರಿದ್ದರು |
| 3 | ಶ್ರೀ. ಮೂರ್ತಿ | ಸಹಾಯಕ ಅಭಿಯಂತರರು ಬೆಸ್ಕಾಂ ಇಲಾಖೆ | ಹಾಜರಿದ್ದರು |
| 4 | ಶ್ರೀ. ಸುನಿಲ್ | ಹಿರಿಯ ಅಭಿಯಂತರರು BWSSB ಇಲಾಖೆ | ಹಾಜರಿದ್ದರು |
| 5 | ಶ್ರೀ. ಬಸವರಾಜ್ | ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಸಿದ್ದಾಪುರ ಪೋಲೀಸ್ ಠಾಣೆ | ಹಾಜರಿದ್ದರು |

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ. ಭೀಮಪ್ಪ | ಸದಸ್ಯರು | ಹಾಜರಿದ್ದರು |
| 2 | ಶ್ರೀಮತಿ. ಪ್ರಮೀಳಾ | ಸದಸ್ಯರು | ಹಾಜರಿದ್ದರು |
| 3 | ಶ್ರೀಮತಿ. ಶಾನ್ ಅಹಮದ್ | ಸದಸ್ಯರು | ಹಾಜರಿದ್ದರು |
| 4 | ಶ್ರೀ. ಬಹದ್ದೂರ್ | ಸದಸ್ಯರು | ಹಾಜರಿದ್ದರು |
| 5 | ಶ್ರೀ. ಷರೀಫ್ | ಸದಸ್ಯರು | ಹಾಜರಿದ್ದರು |

ಮು.ಪಿ.ನೋ.



Scanned with CamScanner

| ಕ್ರಮ ಸಂಖ್ಯೆ | ಸ್ಥಳೀಯರ ಹೆಸರು | ವಿವರ | ಹಾಜರಾತಿ |
|---|---|---|---|
| 1 | ಶ್ರೀ. ಪ್ರದೀಪ್ ಮೆಡೋನ | ಸ್ಥಳೀಯರು | ಹಾಜರಿದ್ದರು |
| 2 | ಶ್ರೀ. ಕಮಲ್ | ಸ್ಥಳಿಯರು | ಹಾಜರಿದ್ದರು |
| 3 | ಶ್ರೀ. ಹನುಮಂತೇಗೌಡ | ಸ್ಥಳೀಯರು | ಹಾಜರಿದ್ದರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ನಿಗಧಿತ ಸಮಯಕ್ಕೆ ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ವರಲಕ್ಷ್ಮಮ್ಮ ಎಲ್. ಸಹಾಯಕ ಆಯುಕ್ತರು (ಆಡಳಿತ) ರವರು ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಮತ್ತೊಮ್ಮೆ ಚರ್ಚಿಸಿದರು ವಿವರಗಳು ಈ ಕೆಳಕಂಡಂತಿವೆ.

1. **ವಾರ್ಡಿನಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-**

- ಶ್ರೀಮತಿ. ವರಲಕ್ಷ್ಮಮ್ಮ, ಸಹಾಯಕ ಆಯುಕ್ತರು (ಆಡಳಿತ) ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ, ಮನೆ ಮನೆಯಿಂದ ಕಸ ಸಂಗ್ರಹಣೆ ಮತ್ತು ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ತಿಳಿಸಿದರು.
- ಸಬೆಯಲ್ಲಿ ಹಾಜರಿದ್ದ ಸದಸ್ಯರಾದ ಶ್ರೀಮತಿ. ಶಾನ್ ಅಹಮದ್ ರವರು ಮಾತನಾಡಿ, ಬಸವನಗುಡಿ ಸುತ್ತಮುತ್ತಲಲ್ಲಿ ಮರದ ರೆಂಬೆರೆಕೊಂಬೆಗಳನ್ನು ಕತ್ತರಿಸಿದ್ದು, ಅದನ್ನು ತೆರವುಗೊಳಿಸುವಂತೆ ಕೋರಿದರು. ಈ ವಿಷಯವಾಗಿ ಶ್ರೀಮತಿ. ವರಲಕ್ಷ್ಮಮ್ಮ ಸಹಾಯಕ ಆಯುಕ್ತರು (ಆಡಳಿತ) ರವರು ಉತ್ತರಿಸಿ ಅರಣ್ಯ ಇಲಾಖೆಯವರಿಗೆ ಪತ್ರ ಬರೆಯುವುದಾಗಿ ತಿಳಿಸಿದರು.

2. **ಬೆಸ್ಕಾಂ ವಿಭಾಗ :-**

- ಸಭೆಯಲ್ಲಿ ಹಾಜರಾಗಿದ್ದ ಸದಸ್ಯರಾದ ಶ್ರೀ. ಷರೀಫ್ ರವರು ಮಾತನಾಡಿ ಬಿಹೆಚ್ಇಎಲ್ ಲೇಔಟ್‌ನ ವ್ಯಾಪ್ತಿಯಲ್ಲಿ ಬಿದ್ದಿರುವ ವಿದ್ಯುತ್ ಕಂಬಗಳನ್ನು ತೆರವುಗೊಳಿಸಲು ಕೋರಿರುತ್ತಾರೆ. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಬೆಸ್ಕಾಂ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶ್ರೀಮತಿ. ರಮಾದೇವಿ ರವರನ್ನು ದೂರವಾಣಿ ಮುಖಾಂತರ ಚರ್ಚಿಸಲಾಗಿ ಸದರಿ ಕಂಬಗಳನ್ನು ತೆರವುಗೊಳಿಸಲು ಕಾಲಾವಕಾಶ ನೀಡಬೇಕಾಗಿ ಕೋರಿರುತ್ತಾರೆ.
- ಸಭೆಯಲ್ಲಿ ಹಾಜರಾಗಿದ್ದ ಸದಸ್ಯರಾದ ಶ್ರೀಮತಿ. ಶಾನ್ ಅಹಮದ್ ರವರು ಮಾತನಾಡಿ ಬಸವನಗುಡಿ ಸುತ್ತಮುತ್ತಲಲ್ಲಿ ಬಿದ್ದಿರುವ ವಿದ್ಯುತ್ ಕಂಬಗಳನ್ನು ತೆರವುಗೊಳಿಸಲು ಕೋರಿರುತ್ತಾರೆ. ಬಸವನಗುಡಿ ವ್ಯಾಪ್ತಿಯ ಬೆಸ್ಕಾಂ ವಿಭಾಗ ರವರಿಗೆ ಪತ್ರ ಬರೆಯುವುದಾಗಿ ವಾರ್ಡಿನ ಅಭಿಯಂತರರು ತಿಳಿಸಿರುತ್ತಾರೆ.

ಮ.ತಿ.ನೋ..



Scanned with CamScanner

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗುಲ್ಬರ್ಗಾ ಕಾಲೋನಿ ಸುತ್ತಮುತ್ತಲಲ್ಲಿ ವಿದ್ಯುತ್ ಕಂಬಗಳಿಗೆ ದೀಪಗಳನ್ನು ಹಾಗೂ ಸ್ವಿಚ್‌ಗಳನ್ನು ಅಳವಡಿಸಲು ಕೋರಿದರು. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆಯ ಶ್ರೀ. ಮೂರ್ತಿ, ಸಹಾಯಕ ಅಭಿಯಂತರರು ಉತ್ತರಿಸಿ ಈ ಬಗ್ಗೆ ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

3. **BWSSB ವಿಭಾಗ :-**

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಕಮಲ್ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನ ಬಾಲ್ಡ್‌ವಿನ್ ಶಾಲೆ ಹತ್ತಿರ ಮ್ಯಾನ್‌ಹೋಲ್ ರಿಪೇರಿ ಮಾಡುವಂತೆ ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ BWSSB ಇಲಾಖೆಯ ಸಹಾಯಕ ಅಭಿಯಂತರರು ಶ್ರೀ.ಸುನಿಲ್ ರವರು ಉತ್ತರಿಸಿ ಈ ವಿಷಯವಾಗಿ ಕ್ರಮ ವಹಿಸಲು 15 ದಿನಗಳ ಕಾಲಾವಕಾಶ ನೀಡುವಂತೆ ಕೋರಿದರು.

4. **ಕಾಮಗಾರಿ ವಿಭಾಗದ ಬಗ್ಗೆ:-**

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮಡೋನ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ತಿಲಕ್‌ನಗರದ ಸುತ್ತಮುತ್ತಲಲ್ಲಿ ರಾಜಕೀಯ ವ್ಯಕ್ತಿಗಳ ನಾಮಫಲಕಗಳನ್ನು ತೆರವುಗೊಳಿಸುವಂತೆ ಕೋರಿರುತ್ತಾರೆ. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮಡೋನ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ಪಾದಚಾರಿ ಮಾರ್ಗದಲ್ಲಿ ಬಿದ್ದರಿರುವ ಡೆಬ್ರಿಸ್ ಅನ್ನು ತೆರವುಗೊಳಿಸುವಂತೆ ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮಡೋನ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ಪಾರ್ಕ್ ಮುಂಭಾಗ ಇರುವ ಬೋರ್‌ವೆಲ್ ರಿಪೇರಿ ಮಾಡಿಸುವಂತೆ ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮಡೋನ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವಂತೆ ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈಗಾಗಲೇ ಸಿ.ಸಿ. ಕ್ಯಾಮರಾ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮಡೋನ ರವರು ಮಾತನಾಡಿ ಟಿಕನ್‌ಕೌಂಟಿ ಮುಖ್ಯ ರಸ್ತೆಯಲ್ಲಿರುವ ಗೋಡೌನ್‌ಗಳನ್ನು ತೆರವುಗೊಳಿಸಲು ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಉತ್ತರಿಸಿ ಈ ಹಿಂದೆಯೇ ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷರು ಈ ಬಗ್ಗೆ ಕ್ರಮ ಕೈಗೊಂಡಿದ್ದು, ತೆರವುಗೊಳಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುವುದಾಗಿ ಸಭೆಗೆ ತಿಳಿಸಿದರು.

ಮ.ತಿ.ನೋ..



Scanned with CamScanner

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಕಮಲ್ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್ ಹಾಗೂ ಬಾಲ್ಡ್‌ವಿನ್ ಶಾಲೆ ಸುತ್ತಮುತ್ತಲಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವಂತೆ ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈಗಾಗಲೇ ಸಿ.ಸಿ. ಕ್ಯಾಮರಾ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುವುದಾಗಿ ಸಭೆಗೆ ತಿಳಿಸಿದರು.

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಹನುಮಂತೇಗೌಡ ರವರು ಮಾತನಾಡಿ ಬಿಬಿಎಂಪಿ (ದಕ್ಷಿಣ) ಕಛೇರಿ ಹಿಂಭಾಗದಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡ ಸಂಖ್ಯೆ:29, ಶಾಪ್ ಸ್ಟ್ರೀಟ್‌ನಲ್ಲಿರುವ ಕಟ್ಟಡದ ಮಾಲೀಕರು ಪಾದಚಾರಿ ರಸ್ತೆಯನ್ನು ಆಕ್ರಮಿಸಿಕೊಂಡು ಕಟ್ಟಡ ನಿರ್ಮಿಸುತ್ತಿರುವುದಾಗಿ ತಿಳಿಸಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಸದರಿ ಕಟ್ಟಡದ ಮಾಲೀಕರಿಗೆ ಈಗಾಗಲೇ ಕೆ.ಎಂ.ಸಿ ಕಾಯ್ದೆ ಅನ್ವಯ ನೋಟಿಸ್‌ಗಳನ್ನು ಜಾರಿ ಮಾಡಿ ಕಾಮಗಾರಿಯನ್ನು ಸ್ಥಗಿತಗೊಳಿಸಿರುವುದಾಗಿ ಸಭೆಗೆ ತಿಳಿಸಿದರು.

5. **ಪೊಲೀಸ್ ಇಲಾಖೆ:-**

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮೆಡೋನ ರವರು ಮಾತನಾಡಿ ಬಿಹೆಚ್‌ಇಎಲ್ ಲೇಔಟ್ ಸುತ್ತಮುತ್ತಲಲ್ಲಿ ಅನಧಿಕೃತವಾಗಿ ನಿಂತಿರುವ ವಾಹನಗಳನ್ನು ತೆರವುಗೊಳಿಸಲು ಕೋರಿದರು ಈ ವಿಷಯವಾಗಿ ಅಧ್ಯಕ್ಷರು ಉತ್ತಿರಿಸಿ ಸಂಚಾರ ಪೊಲೀಸ್ ಠಾಣೆ ರವರಿಗೆ ಪತ್ರ ವ್ಯವಹರಿಸಿ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (ನರಸಿಂಹಯ್ಯ ಎನ್.) | (ವರಲಕ್ಷ್ಮಮ್ಮ ಎಲ್) 18/1/21 |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ವಾರ್ಡ್-153 ಜಯನಗರ | ವಾರ್ಡ್-153 ಜಯನಗರ |



Scanned with CamScanner